# ತುಮಕೂರು ವಿಶ್ವವಿದ್ಯಾನಿಲಯ

**ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು,**
**ಬಿ.ಹೆಚ್. ರಸ್ತೆ, ತುಮಕೂರು. 572103 ದೂ.ಸಂ: 0816-2260220**

**ಸಂಖ್ಯೆ:ವಿವಿಕಾತು:**2022-23: ೩೦೮. **ದಿನಾಂಕ:26.12.2022**

## :ದರಪಟ್ಟಿ ಆಹ್ವಾನ:

**ವಿಷಯ:** ತುಮಕೂರು ವಿಶ್ವವಿದ್ಯಾನಿಲಯದ ವಿಜ್ಞಾನ ಕಾಲೇಜಿಗೆ ಒಂದು ಮೊಬೈಲ್‌ನ್ನು ಸರಬರಾಜು ಮಾಡುವ ಕುರಿತು.

***

ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿಗೆ ಈ ಕೆಳಕಂಡ ಸಂರಚನೆಯುಳ್ಳ (Specification) ಒಂದು ಮೊಬೈಲ್‌ನ್ನು ಸರಬರಾಜು ಮಾಡಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಅರ್ಹ ಏಜೆನ್ಸಿ/ಸಂಸ್ಥೆ ಗಳಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ.

| Sl.No. | Specification Of The Mobile | QTY | Rate (Including all Tax) |
|---|---|---|---|
| 1. | 8GB Ram/128GB Storage/5G/6.7" FHD Amoled Display/5000m AH | 01 | |

**ಷರತ್ತು ಮತ್ತು ನಿಬಂಧನೆಗಳು:**

1. ಮುಚ್ಚಿದ ಲಕೋಟೆಯ ಮೇಲೆ **"ತುಮಕೂರು ವಿಶ್ವವಿದ್ಯಾನಿಲಯದ ವಿಜ್ಞಾನ ಕಾಲೇಜಿಗೆ ಮೊಬೈಲ್ ಸರಬರಾಜು ಮಾಡಲು"** ದರಪಟ್ಟಿ ಎಂದು ಸ್ಪಷ್ಟವಾಗಿ ಎಂದು ನಮೂದಿಸಬೇಕು.
2. ಕ್ರಮಬದ್ಧವಾಗಿರದ ದರಪಟ್ಟಿಯನ್ನು ಅಂಗೀಕರಿಸುವ ಅಥವಾ ತಿರಸ್ಕರಿಸುವ ಹಕ್ಕನ್ನು ಕಾಲೇಜು ಕಾಯ್ದಿರಿಸಿಕೊಂಡಿದೆ.
3. ದರಪಟ್ಟಿಯನ್ನು ಸಲ್ಲಿಸಲು ಕೊನೆಯ **ದಿನಾಂಕ:04.01.2023 ಅಪರಾಹ್ನ 04.00** ಗಂಟೆಯವರೆಗೆ ಸಲ್ಲಿಸಬಹುದಾಗಿದ್ದು ದರಪಟ್ಟಿಗಳನ್ನು ಮುದ್ದಾಂ ಅಥವಾ ಅಂಚೆಯ ಮೂಲಕ ಸಲ್ಲಿಸಬಹುದು. ಯಾವುದೇ ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ಕಾಲೇಜು ಜವಬ್ದಾರರಾಗುವುದಿಲ್ಲ.
4. ದರಪಟ್ಟಿಯನ್ನು **ದಿನಾಂಕ:04.01.2023 ರಂದು ಅಪರಾಹ್ನ 4.30 ಗಂಟೆಗೆ** ತೆರೆಯಲಾಗುವುದು.
5. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ **GSTIN No.** ಮತ್ತು **PAN No.** ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
6. ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ **60** ದಿನಗಳವರೆಗೆ ಚಾಲ್ತಿಯಲಿರುತ್ತದೆ.
7. ಸರಬರಾಜು ಮಾಡಲು ಯಾವುದೇ ಮುಂಗಡ ಹಣವನ್ನು ನೀಡಲಾಗುವುದಿಲ್ಲ.
8. ದರಪಟ್ಟಿಯಲ್ಲಿ ನಮೂದಿಸಿದ ದರಗಳು ತೆರಿಗೆ ಮತ್ತು ಸಾಗಾಣಿಕೆ ಮೊತ್ತವನ್ನು ಒಳಗೊಂಡಿರತಕ್ಕದ್ದು.
9. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಸಂಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು ಕಾಯ್ದಿರಿಸಿಕೊಂಡಿದೆ.

(ಪು.ತಿ.ನೋ)

10. ದರಪಟ್ಟಿಗಳ ಆಯ್ಕೆಯ ವಿಷಯದಲ್ಲಿ ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನ ತೀರ್ಮಾನವೇ ಅಂತಿಮವಾಗಿರುತ್ತದೆ.
11. ತಮ್ಮ ಸಂಸ್ಥೆಯು ಸರಬರಾಜು ಮಾಡಲು ಉದ್ದೇಶಿಸಿರುವ ಮೊಬೈಲ್‌ನ್ನು ಸಂರಚನೆಗಳಲ್ಲಿ ವ್ಯತ್ಯಾಸ ಇದ್ದರೆ ಸಂರಚನೆಗಳ ಮಾಹಿತಿಯನ್ನು ದರಪಟ್ಟಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸುವುದು.
12. ಷರತ್ತು ಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.
13. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
14. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
15. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ಇವರನ್ನು ಸಂಪರ್ಕಿಸಬಹುದು.

ಪ್ರಾಂಶುಪಾಲರು

ಪ್ರಾಂಶುಪಾಲರು
ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು
ತುಮಕೂರು-572103

ಪ್ರತಿಗಳು:

1. ಸೂಚನಾ ಫಲಕ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು.
2. ಶ್ರೀ. ಹರೀಶ್ ಕುಮಾರ್ ಕೆ, ಸಂಯೋಜಕರು, ವೆಬ್ ಸೈಟ್ ಸಮಿತಿ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು. – ವಿಜ್ಞಾನ ಕಾಲೇಜಿನ ವೆಬ್ ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
3. ಕಚೇರಿ ಪ್ರತಿ.